**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

**ಸಿ.ಸಿ.ನಂ. 1197/2019**

| | | |
|---|---|---|
| ಸಾಕ್ಷಿದಾರರ ಹೆಸರು | : | ಶಿವರಾಜು |
| ತಂದೆಯ ಹೆಸರು | : | ಚಿಕ್ಕಮಾದಯ್ಯ ಕೆ |
| ವಯಸ್ಸು | : | 61 ವರ್ಷ |
| ಉದ್ಯೋಗ | : | ನಿವೃತ್ತ ಪಿ.ಎಸ್.ಐ |
| ವಾಸಸ್ಥಳ | : | ನಂಜನಗೂಡು ಟೌನ್. |

**ಸಾಕ್ಷಿಯನ್ನು ದಿನಾಂಕಃ 17.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು 2015 ರಿಂದ 2020 ರವರೆಗೆ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಸಹಾಯಕ ಪೊಲೀಸ್ ಉಪನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 27.04.2019 ರಂದು ನಾನು ಠಾಣೆಯಲ್ಲಿರುವಾಗ ಚಾಸಾ–1ರವರು ಹಲ್ಲೆಗೊಳಗಾಗಿ ಚಿಕಿತ್ಸೆಗೆ ದಾಖಲಾಗಿರುತ್ತಾರೆ ಎಂದು ಆಸ್ಪತ್ರೆಯಿಂದ ಬಂದ ಸೂಚನಾಪತ್ರದ ಮೇರೆಗೆ ಆಸ್ಪತ್ರೆಗೆ ಭೇಟಿ ನೀಡಿ ನಿಪಿ–1 ರಂತೆ ಚಾಸಾ–1ರವರ ಹೇಳಿಕೆ ದೂರು ಪಡೆದು, ನಂತರ ಠಾಣೆಗೆ ವಾಪಸ್ ಬಂದು ಠಾಣಾ ಮೊಕದ್ದಮೆ ಸಂಖ್ಯೆ 26/2019 ರಂತೆ ಪ್ರಥಮ ವರ್ತಮಾನ ವರದಿ ದಾಖಲಿಸಿರುತ್ತೇನೆ. ಸಾಕ್ಷಿಯು ನಿಪಿ–1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು **ನಿಪಿ–1(ಬಿ)** ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ–5** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ–5(ಎ)** ಎಂದು ಗುರುತಿಸಲಾಯಿತು.

ದಿನಾಂಕ 015.05.2019 ರಂದು ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಂಚರ ಸಮಕ್ಷಮ ನಿಪಿ-2 ರಂತೆ ಮಹಜರ್ ಮಾಡಿ 1 ದೊಣ್ಣೆಯನ್ನು ವಶಪಡಿಕೊಂಡಿರುತ್ತೇನೆ. ಸಾಕ್ಷಿಯು ಮಹಜರ್ ನ್ನು ನೋಡಿ ಗುರುತಿಸಿರುತ್ತಾರೆ. ತನಿಖೆ ಮುಂದುವರಿಸಿ ಚಾಸಾ-1ರವರ ಮರು ಹೇಳಿಕೆ, ಚಾಸಾ-2, 3 ಮತ್ತು 6 ರವರ ಹೇಳಿಕೆ ಪಡೆದಿರುತ್ತೇನೆ.

ದಿನಾಂಕ 28.05.2019 ರಂದು ನಿಪಿ-4 ರಂತೆ ಗಾಯದ ಪ್ರಮಾಣಪತ್ರ ಪಡೆದಿರುತ್ತೇನೆ. ಸಾಕ್ಷಿಯು ನಿಪಿ-4 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು **ನಿಪಿ-4(ಬಿ)** ಎಂದು ಗುರುತಿಸಲಾಯಿತು. ನಂತರ ಸರ್ವೆ ನಂ. 92/1 ಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆ ಪಡೆದಿರುತ್ತೇನೆ. ಸಾಕ್ಷಿಯು ಪಹಣಿ ಪತ್ರಿಕೆಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು **ನಿಪಿ-6** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-6(ಎ)** ಎಂದು ಗುರುತಿಸಲಾಯಿತು. ನಂತರ ಆರೋಪಿಗಳ ವಿರುದ್ಧ ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ. ನಾನು ವಶಪಡಿಸಿಕೊಂಡ ದೊಣ್ಣೆಯನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಮುದ್ದೆ ಮಾಲು-1 ನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ.ಸಿ.ಎಸ್, ವಕೀಲರಿಂದಃ</u>**

ಆಸ್ಪತ್ರೆಯಿಂದ ಸಂಜೆ 5.00 ಗಂಟೆಗೆ ಮಾಹಿತಿ ಬಂದಿರುತ್ತದೆ. ನಾನು ಆಸ್ಪತ್ರೆಗೆ ಹೋದಾಗ ರಾತ್ರಿ 8.30 ಗಂಟೆಯಾಗಿತ್ತು. ಆ ಸಮಯದಲ್ಲಿ ಚಾಸಾ-1ರವರು ಸಾಮಾನ್ಯ ವಾರ್ಡ್ ಕೊಠಡಿಯಲ್ಲಿದ್ದರು. ನಾನು ನೋಡಿದಾಗ ಚಾಸಾ-1ರವರ ತಲೆಗೆ ಪೆಟ್ಟಾಗಿತ್ತು. ಚಾಸಾ-1ರವರು ಯಾವುದೇ ಹೇಳಿಕೆ ನೀಡದಿದ್ದರೂ ಸದರಿ ಹೇಳಿಕೆಯನ್ನು ನಾನೇ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಅನುಕೂಲವಾಗಲೆಂದು ಸುಳ್ಳು ಹೇಳಿಕೆ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಸುಳ್ಳು ದೂರಿಗೆ ಪೂರಕವಾಗಿ ಸುಳ್ಳು ಪ್ರಥಮ ವರ್ತಮಾನ ವರದಿ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸ್ಥಳಕ್ಕೆ ಹೋಗಿ ಮಹಜರ್ ಮಾಡಿಲ್ಲ

ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ಮಹಜರ್ ಗೆ ಸಹಿ ಮಾಡಲು ಯಾವುದೇ ತೊಂದರೆ ಇರಲಿಲ್ಲ. ನಾನು ಸ್ಥಳಕ್ಕೆ ಹೋಗಿಲ್ಲವಾದ್ದರಿಂದ ಮಹಜರ್ ನ್ನು ಠಾಣೆಯಲ್ಲಿಯೇ ಕುಳಿತು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರು ನನ್ನ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ ಎಂದರೆ ಸರಿಯಲ್ಲ. ಸದರಿ ಹೇಳಿಕೆಗಳನ್ನು ಈ ಪ್ರಕರಣದ ಉದ್ದೇಶಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಕೋರಿಕೆಯ ಮೇರೆಗೆ ಗಾಯದ ಪ್ರಮಾಣಪತ್ರ ಪಡೆದು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಪಹಣಿ ಪತ್ರಿಕೆಯಲ್ಲಿ ಗೋವಿಂದರಾಜು ಮತ್ತು ಕಾಡಯ್ಯರವರ ಹೆಸರು ಇರುತ್ತದೆ. ಕಾಡಯ್ಯರವರು ಕೂಡ ಜಮೀನಿನ ಮಾಲೀಕರು ಎಂದರೆ ಸರಿ. ಪಹಣಿ ಪತ್ರಿಕೆ ಪ್ರಕಾರ ಕಾಡಯ್ಯರವರು ಕೂಡ ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿ. ಚಾಸಾ-1 ರವರು ನೀಡಿದ ಸುಳ್ಳು ದೂರಿಗೆ ಪೂರಕರವಾಗಿ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗಳಿಗು, ಈ ಪ್ರಕರಣಕ್ಕೂ ಯಾವುದೇ ಸಂಬಂಧವಿಲ್ಲವೆಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಸಾಕ್ಷ್ಯಧಾರಗಳು ಇಲ್ಲದಿದ್ದರೂ ಸುಳ್ಳು ದೋಷಾರೋಪಣಾಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಮುದ್ದೆ ಮಾಲುಗಳು ಈ ಪ್ರಕರಣಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**